# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 448 |
| ಸದಸ್ಯರ ಹೆಸರು | : | ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 30.01.2026. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 14ರಿಂದ 18 ವರ್ಷದ ಮಕ್ಕಳು ಅತಿ ಹೆಚ್ಚು ಆನ್ ಲೈನ್ ಗೀಳಿಗೆ ಸಿಲುಕುತ್ತಿರುವ ಆಘಾತಕಾರಿ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಬಂದಿದ್ದಲ್ಲಿ, ಮಕ್ಕಳ ಆನ್ ಲೈನ್ ಸುರಕ್ಷತೆ ಕುರಿತು ಕಾರ್ಯಾಚರಣೆ ವಿಧಾನವನ್ನು ರೂಪಿಸುವ ತುರ್ತು ಅಗತ್ಯವಿದ್ದರೂ ಸರ್ಕಾರ ಇದುವರೆವಿಗೆ ಈ ಕುರಿತು ಅಗತ್ಯ ಕ್ರಮ ವಹಿಸದಿರಲು ಕಾರಣವೇನು; | ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಚೈಲ್ಡ್ ಫಂಡ್ ಇಂಡಿಯಾ ಸಹಭಾಗಿತ್ವದೊಂದಿಗೆ ಮಕ್ಕಳ ಆನ್ ಲೈನ್, ಲೈಂಗಿಕ ಶೋಷಣೆ ಮತ್ತು ದುರುಪಯೋಗ ಕುರಿತು ವಿವಿಧ ಇಲಾಖೆಗಳ ಭಾಗೀದಾರರೊಂದಿಗೆ ಈಗಾಗಲೇ ನಾಲ್ಕು ಹಂತದಲ್ಲಿ ತರಬೇತಿ ಕಾರ್ಯವನ್ನು ನೀಡಲಾಗಿದೆ. |
| ಇ) | ಮಕ್ಕಳು ಅತಿ ಹೆಚ್ಚು ಇತ್ತೀಚೆಗೆ ಆನ್ ಲೈನ್ ಗೀಳಿಗೆ ಒಳಗಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಪರಿಹಾರಗಳೇನು; | ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಪ್ರತಿ ಜಿಲ್ಲೆ, ತಾಲ್ಲೂಕು ಮಟ್ಟದಲ್ಲಿ ಆನ್ ಲೈನ್ ಸುರಕ್ಷತೆ ಕುರಿತು ಶಾಲಾ ಮಕ್ಕಳೊಂದಿಗೆ ಮತ್ತು ಕಾಲೇಜು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವುದರೊಂದಿಗೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸುರಕ್ಷಿತ ಜಾಲತಾಣದ ಬಗ್ಗೆ ಮಾಹಿತಿಯನ್ನು ಒದಗಿಸಲಾಗುತ್ತಿದೆ. |
| ಈ) | ಅತಿಯಾದ ಆನ್ ಲೈನ್ ಗೀಳು ಲಕ್ಷಾಂತರ ಮಕ್ಕಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿರುವ ಸಂಕೀರ್ಣ ಸಮಸ್ಯೆಯಾಗಿದ್ದು, ಮಕ್ಕಳ ದೈಹಿಕ, ಭಾವನಾತ್ಮಕ, ಮಾನಸಿಕ ಯೋಗಕ್ಷೇಮದ ಮೇಲೆ ದೂರಗಾಮಿ ಪರಿಣಾಮ ಬೀರುತ್ತಿದ್ದು ಮಕ್ಕಳು ಬಳಸುವ ಮೊಬೈಲ್ ಗಳಲ್ಲಿ ಅಸುರಕ್ಷಿತ, ಅಶ್ಲೀಲ ಆ್ಯಪ್ ಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲೇಬೇಕಾದ ತುರ್ತು ಅನಿವಾರ್ಯತೆ ಸೃಷ್ಟಿಯಾಗಿದ್ದು, ಈ ಕುರಿತು ಸರ್ಕಾರ ವಹಿಸಿರುವ ಕ್ರಮಗಳೇನು; | ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಮಕ್ಕಳ ಆನ್ ಲೈನ್ ಸುರಕ್ಷತೆ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಕ್ಕಳ ರಕ್ಷಣಾ ನಿರ್ದೇಶನಾಲಯ ಇಲಾಖೆಗಳಿಗೆ ಕ್ರಮ ಕೈಗೊಳ್ಳುವಂತೆ ಶಿಫಾರಸ್ಸುಗಳನ್ನು ಸಲ್ಲಿಸಿದೆ. |

| | | |
|---|---|---|
| ಉ) | ಮಕ್ಕಳ ಆನ್ ಲೈನ್ ಗೀಳಿನ ಪರಿಣಾಮಕಾರಿ ತಡೆಗೆ ಕಾರ್ಯಪಡೆ ರಚನೆ, ಮಕ್ಕಳ ಸುರಕ್ಷತೆಯನ್ನು ಆನ್ ಲೈನ್ ನಲ್ಲಿ ಖಚಿತಪಡಿಸಿಕೊಳ್ಳಲು ಜಾಗೃತಿ ಮೂಡಿಸುವುದು, ಡಿಜಿಟಲ್ ಸಾಕ್ಷರತೆ ವಯಸ್ಸಿಗೆ ಅನುಗುಣವಾಗಿ ಟೂಲ್ ಕಿಟ್ ಅಭಿವೃದ್ಧಿ ಸೇರಿದಂತೆ ಮಕ್ಕಳಿಗೆ ಅತ್ಯಂತ ಸುರಕ್ಷಿತ ಡಿಜಿಟಲ್ ಪರಿಸರವನ್ನು ಸೃಷ್ಟಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಮಕ್ಕಳು ಆನ್ ಲೈನ್ ನಿಂದ ಯಾವುದೇ ರೀತಿಯ ಲೈಂಗಿಕ ಕಿರುಕುಳ/ದೌರ್ಜನ್ಯಕ್ಕೆ ಒಳಗಾದಲ್ಲಿ ಮಕ್ಕಳ ಸಹಾಯವಾಣಿ 1098 ಹಾಗೂ ಪ್ರಸ್ತುತ ಜಾರಿಯಲ್ಲಿರುವ "ಅಕ್ಕಪಡೆ"ಯ ಸಹಾಯವನ್ನು ಪಡೆದು ತಮಗೆ ಉಂಟಾದ ಸಮಸ್ಯೆಯನ್ನು ಪರಿಹರಿಸಿಕೊಳ್ಳಬಹುದು. |

ಮಮಇ 27 ಮಭಾಬ 2026

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.